ಮೈಸೂರ ಗೆಜೆಟ್

ಸರ್ಕಾರದಿಂದ ಪ್ರಕಟಿಸಲ್ಪಟ್ಟದ್ದು.

ಬೆಂಗಳೂರು, ಶನಿವಾರ, ಜನವರೀ ತಾ|| 8, ಸ್ಯ 1887.

ಈ ಭಾಗವನ್ನು ಪ್ರತ್ಯೇಕ ಕೀರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನ್‌ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರು, ವಗ್ಗೈರೇರಿಂದ ಕೊಡೋಣಾದ ಇಸ್ತಿಹಾರ್ ನಾಮೆಗಳು.

ಫಿನಾನ್ಷಿಯಲ್ ಇಲಾಖೆ.

1882ನೇ ಇಸವಿಹು ಮೈಸೂರು ರೆವಿನ್ಯೂ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಷರಾ ಬರೆಯಲ್ಪಡಬಹುದಾದಂಥಾ ನದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ನ್‌ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಷ್ಫೇಸ್‌ಮೆಂಟ್ ಯಾನೇ ಷರಾ ಬಗ್ಗೆ ಇದರಡಿ ರುಜು ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ರೈಫ್ಟಿಕೇಟಾದ ಡಿವಾಂಡ್ ಡ್ರಾಫ್ಟ್‌ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಷ್ಫೇಸ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡಿರ್ನ್,
ಕಾಂಪ್ಟ್ರೋಲರ್.

ಅಂಚೇ ಇಲಾಖೆ.

ನಂ. 528—275. ತಾರೀಖು 6ನೇ ಜನವರೀ 1887.

ಇದರಿಂದ ಸಕಲ ಜನಗಳಿಗೂ ತಿಳಿಯುವ ಬಗ್ಗೆ ಪ್ರಕಟಿಸಲ್ಪಡುವದೇನಂದರೆ, ಮೈಸೂರ ಶ್ರೀಮ್ ಮಹಾರಾಜ ರಾಜಾಸಾಹೇಬ್ ಬಹದೂರವರ ದಿವಾನ್ಜರವರ ಅಪ್ಪಣೆ ಅನುಸರಿಸಿ ಚನ್ನಗಿರಿ ತಾಲ್ಲೂಕು ಹೊದಿಗೆರೆಯಲ್ಲಿ ಅಂಚೇ ಆಫೀಸ್ ಸ್ಥಾಪಿಸಲ್ಪಟ್ಟಿರುತ್ತೆ.

ಬಿ. ಮರಿಗಂಗಯ್ಯ,
ಅಂಚೇ ಬಕ್ಷಿ.